ಸಿಸಿ.645/2021 **ಪಿ.ಡಬ್ಲ್ಯೂ-1** ಹೆಸರುಃ ರವಿ ಎಸ್.ಕೆ

**ದಿನಾಂಕಃ 17.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೊಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

2. ಸಾಕ್ಷಿ ದಿಃ 16.04.2020 ರಂದು ಶ್ರೀ ರಾಘವೇಂದ್ರ ವೈನ್ಸ್ ಮದ್ಯದ ಅಂಗಡಿಯಲ್ಲಿ ಜರುಗಿಸಿದ ಮಹಜರಿನಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರಿನ ದೃಡೀಕೃತ ಪ್ರತಿಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸದರಿ ಸಮಯದಲ್ಲಿ ಅಬಕಾರಿ ಇಲಾಖೆಯ ಸಿಬ್ಬಂದಿಗಳು ಮತ್ತು ಪೊಲೀಸರು ಇದ್ದರು. ಸದರಿ ಮಹಜರನ್ನು ಪೊಲೀಸರು ಸಂಜೆ 6.00 ರಿಂದ 8.00 ಗಂಟೆವರೆಗೆ ಜರುಗಿಸಿರುತ್ತಾರೆ. ಸಾಕ್ಷಿ ಮಹಜರಿನ ಕಾಲಕ್ಕೆ ತಯಾರಿಸಿದ ಮದ್ಯದ ಪ್ರಮಾಣದ ಕುರಿತಾದ ಪಟ್ಟಿಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲಾತಿಯನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸಾಕ್ಷಿ ದಿಃ 16.04.2020 ರಂದು ಶ್ರೀ ರಾಘವೇಂದ್ರ ಮದ್ಯದ ಅಂಗಡಿಯ ಬಳಿ ಜರುಗಿಸಿದ ಮತ್ತೊಂದು ಮಹಜರಿನಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಹಜರನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಮಹಜರಿನ ಸಮಯದಲ್ಲಿ ಮಾಡಿರುತ್ತೇನೆ. ಸಾಕ್ಷಿ ಮಹಜರಿನ ಸಮಯದಲ್ಲಿ ತೆಗೆದ ಛಾಯಾಚಿತ್ರವನ್ನು ನೋಡಿ ಗುರುತಿಸಿದ್ದು, ನಿಪಿ-5 ಎಂದು ಗುರುತಿಸಲಾಯಿತು. ಸದರಿ ಸಮಯದಲ್ಲಿ ನನ್ನೊಂದಿಗೆ ಇದ್ದ ಪಂಚರ ಹೆಸರು ನೆನಪಿಲ್ಲ. ಈ ಕುರಿತು ನಾನು ತನಿಖಾಧಿಕಾರಿಗೆ ಯಾವುದೇ ಮರುಹೇಳಿಕೆಯನ್ನು ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಭಾಗಶಃ ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

3. ಮಹಜರಿನ ಸಮಯದಲ್ಲಿ ಚಾಸಾ-2 ಮತ್ತು 3 ರವರು ಸಹ ಹಾಜರಿದ್ದರು ಎಂದರೆ ಗೊತ್ತಿಲ್ಲ. ಚಾಸಾ-2 ಮತ್ತು 3 ರವರು ಮಹಜರಿಗೆ ಸಹಕರಿಸಿ, ಸಹಿ ಮಾಡಿರುತ್ತಾರೆ ಎಂದರೆ ಗೊತ್ತಿಲ್ಲ. ಈ ಕುರಿತು ದಿಃ 16.09.2020 ರಂದು ನಮ್ಮ ಅಂಗಡಿಯಲ್ಲಿ ಕಳ್ಳತನ ಮಾಡಿದ ಆರೋಪಿತರನ್ನು ಗುರುತಿಸಿದ ಬಗ್ಗೆ ತನಿಖಾಧಿಕಾರಿಗೆ ಮರುಹೇಳಿಕೆ ನೀಡಿರುತ್ತೇನೆ

ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಮರುಹೇಳಿಕೆಯನ್ನು ನಿಪಿ-6 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀ ಎಸ್.ವಿ ವಕೀಲರಿಂದಃ**

4. ಮಹಜರಿನಲ್ಲಿ ಬರೆದ ವಿಚಾರಗಳ ಕುರಿತು ನನಗೆ ಗೊತ್ತಿಲ್ಲ ಎಂದರೆ ಸರಿ. ನಿಪಿ-5 ರ ಛಾಯಾಚಿತ್ರ ನಮ್ಮ ಅಂಗಡಿಗೆ ಸಂಬಂಧಿಸಿದ ಕಳ್ಳತನದ ಕುರಿತಾಗಿ ಜರುಗಿಸಿದ ಮಹಜರಿನ ಕಾಲಕ್ಕೆ ತೆಗೆದ ಛಾಯಾಚಿತ್ರ ಅಲ್ಲ ಎಂದರೆ ಸರಿಯಲ್ಲ. ಪೊಲೀಸರು ಹೇಳಿದ ಮೇರೆಗೆ ಮಹಜರಿಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

**ಪಾಟೀ ಸವಾಲುಃ 5 ನೇ ಆರೋಪಿ ಪರ ಶ್ರೀ ಎಸ್.ಎಸ್ ವಕೀಲರಿಂದಃ 4 ನೇ ಆರೋಪಿತರ ವಕೀಲರ ಪಾಟೀ ಸವಾಲನ್ನೆ ಅಳವಡಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ